ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

ಸಂಖ್ಯೆ: ಜೆಎಸ್‌ಎಸ್‌ಸಿಎಂ/ ದಿನಾಂಕ: 11.06.2016

**ಪ್ರಕಟಣೆಯ ಕೃಪೆಗಾಗಿ**

## ಜ್ಞಾನದ ವಿಕಸನ ಅಂತರಂಗವನ್ನು ತಾಗಬೇಕು

ಮೈಸೂರು ನಗರದ ಬಿ ಎನ್ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ದಿನಾಂಕ: 11.06.2016 ರಂದು ಸ್ನಾತಕೋತ್ತರ ವಿಭಾಗದ ಸಾಂಸ್ಕೃತಿಕ ಹಾಗೂ ಕ್ರೀಡಾ ವೇದಿಕೆಯ ಸಮಾರೋಪ ಸಮಾರಂಭವು ಸಾಂಗವಾಗಿ ನೆರವೇರಿತು. ವಿದ್ಯಾದಾನವು ಶ್ರೇಷ್ಠವಾದುದು, ಜೆಎಸ್‌ಎಸ್ ಮಾದರಿ ಸಂಸ್ಥೆ, ಮೈಸೂರು ವಿಶ್ವವಿದ್ಯಾನಿಲಯಗಳಲ್ಲಿ ಮಾಡಬೇಕೆಂದುಕೊಂಡ ಅದೆಷ್ಟೋ ಪ್ರಯೋಗಗಳು ಜೆಎಸ್‌ಎಸ್‌ನಲ್ಲಿ ಮೊದಲು ಆರಂಭಗೊಳ್ಳುತ್ತವೆ. ಪ್ರಾಧ್ಯಾಪಕರ ಸಮರ್ಪಣಾ ಮನೋಭಾವ, ಕಾರ್ಯಪ್ರವೃತ್ತಿ ಸಂಸ್ಥೆಗೆ ಆದರ್ಶಪ್ರಾಯವಾಗಿದೆ ಎಂದು ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ ಕೆ ಭೈರಪ್ಪ ನವರು ಸಮಾರೋಪ ಭಾಷಣದಲ್ಲಿ ಅಭಿಪ್ರಾಯಪಟ್ಟರು ಹಾಗೂ ಇಲ್ಲಿ ಅಧ್ಯಯನ ಮಾಡಿದ ವಿದ್ಯಾರ್ಥಿಗಳಿಗೆ ಜ್ಞಾನ ಮತ್ತು ಆಧ್ಯಾತ್ಮಿಕತೆ ಎರಡರ ಸಂಗಮವಾಗಿ ಅವರ ಬದುಕು ಸುಂದರಗೊಳ್ಳುತ್ತದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀ ಜಿ ನಟರಾಜ್‌ರವರು, ಜಿಲ್ಲಾ ಪಂಚಾಯತ್ ಉಪಾಧ್ಯಕ್ಷರು, ಇವರು ಜೆಎಸ್‌ಎಸ್ ಸಂಸ್ಥೆಯು ನಡೆದು ಬಂದ ಹಾದಿ ಹಾಗೂ ಅದರ ಸಾಧನೆ, ಹಿರಿಮೆಯ ಬಗ್ಗೆ ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪದ್ಮಭೂಷಣ ಡಾ ಎಂ ಮಹದೇವಪ್ಪನವರು, ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ವಿಭಾಗ, ಜೆಎಸ್‌ಎಸ್ ಮಹಾವಿದ್ಯಾಪೀಠ ಇವರು ಮಾತನಾಡುತ್ತಾ, ರೈತರು ಹಾಗೂ ವಿದ್ಯಾರ್ಥಿಗಳು ದೇಶದ ಭವಿಷ್ಯದ ಹರಿಕಾರರು, ದೇಶದ ಅಭಿವೃದ್ಧಿಗಾಗಿ ಗ್ರಾಮೀಣ ಪ್ರದೇಶದಲ್ಲಿನ ಸುಧಾರಣೆ ಹಾಗೂ ಗಾಂಧೀಜಿಯವರ ತತ್ವಗಳನ್ನು ಅಳವಡಿಸಿಕೊಳ್ಳಬೇಕಿದೆ. ಗುರಿ, ಶ್ರದ್ಧೆ, ಪರಿಶ್ರಮ ಇವು ಮೂರು ಯಶಸ್ಸಿನ ಹಾದಿಯ ಮೆಟ್ಟಿಲುಗಳು. ವಿದ್ಯಾರ್ಥಿಗಳು ಅವಕಾಶಗಳಿಗೆ ಕಾದು ಕುಳಿತುಕೊಳ್ಳುವ ಬದಲು ಅವಕಾಶಗಳನ್ನು ಸೃಷ್ಟಿಸಿಕೊಳ್ಳುವ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕೆಂದು ಕಿವಿಮಾತು ಹೇಳಿದರು

ಕಾರ್ಯಕ್ರಮದಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಿ ಗೌರವಿಸಲಾಯಿತು. ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ಹಾಗೂ ಸ್ನಾತಕೋತ್ತರ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಯ ಸಂಚಾಲಕರುಗಳಾದ ಡಾ. ಎಂ.ಪಿ. ಸೋಮಶೇಖರ್ ಮತ್ತು ಶ್ರೀ ಎಂ.ಎಸ್. ವೆಂಕಟರಾವ್ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ರಜಿತಪ್ರಭು ಮತ್ತು ತಂಡದವರು ಪ್ರಾರ್ಥನೆ ಮಾಡಿದರು, ವಿದ್ಯಾರ್ಥಿನಿ ಚೈತನ್ಯ ರವರು ಸ್ವಾಗತಿಸಿದರು. ಗುರುಸ್ವಾಮಿ ಬಿ ಎಂ ರವರು ವಂದಿಸಿದರು ಮತ್ತು ಜಾಹ್ನವಿ ಎಸ್ ಕಾರ್ಯಕ್ರಮ ನಿರೂಪಿಸಿದರು.

(ಪ್ರೊ. ಎಂ. ಮಹದೇವಪ್ಪ)

ಪ್ರಾಂಶುಪಾಲರು

ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570025

ಗೆ

ಸಂಪಾದಕರು

---------------

---------------

ಮೈಸೂರು